## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2022-23ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಸಮುದಾಯ ಭವನ/ವಿದ್ಯಾರ್ಥಿನಿಲಯಗಳ ನಿರ್ಮಾಣಕ್ಕೆ ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014.
2. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017.
3. ಮಾನ್ಯ ಇಲಾಖಾ ಸಚಿವರ ಟಿಪ್ಪಣಿ ಸಂಖ್ಯೆ: ಬಿಸಿಡಬ್ಲ್ಯೂ 367 ಬಿಎಂಎಸ್ 2022 ದಿನಾಂಕ:-18.11.2022.

---------

**ಪ್ರಸ್ತಾವನೆ:-**

ಮೇಲೆ ಓದಲಾದ (1)ರಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-001-0-05 ರಡಿ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕಾಗಿ ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೂ.10.00 ಲಕ್ಷ, ತಾಲ್ಲೂಕು ಕೇಂದ್ರ ಸ್ಥಾನ ರೂ.25.00 ಲಕ್ಷ ಹಾಗೂ ಜಿಲ್ಲಾ ಕೇಂದ್ರಸ್ಥಾನ ರೂ.50.00 ಲಕ್ಷಗಳಂತೆ ಗರಿಷ್ಠ ಮಿತಿಯೊಳಗೊಳಪಟ್ಟು ಪ್ರವರ್ಗ-1, 2ಎ, 3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಜಾತಿಗಳ ನೋಂದಾಯಿತ ಸಂಘ/ಸ್ವಯಂ ಸೇವಾ ಸಂಸ್ಥೆ/ಟ್ರಸ್ಟ್‌ಗಳಿಗೆ ಸಹಾಯಧನವನ್ನು ಮಂಜೂರು ಮಾಡಲಾಗುತ್ತಿದೆ.

ಮೇಲೆ ಓದಲಾದ (2)ರಲ್ಲಿ ದಿನಾಂಕ:05.11.2014ರ ಆದೇಶದಲ್ಲಿ ತಿಳಿಸಿರುವ ಅನುದಾನದ ಮಿತಿಯನ್ನು ಅಗತ್ಯ ಸಂದರ್ಭಗಳಲ್ಲಿ ಸಡಿಲಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಚ್ಚುವರಿಯಾಗಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ (3)ರ ಮಾನ್ಯ ಇಲಾಖಾ ಸಚಿವರ ಟಿಪ್ಪಣಿಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಲೆಕ್ಕಶಿರ್ಷಿಕೆ:2225-03-001-0-05-103ರಡಿ ಈಗಾಗಲೇ ಬಿಡುಗಡೆಯಾಗಿ ಬಳಕೆಯಾಗದೇ ಉಳಿಕೆಯಾಗಿರುವ ಲಭ್ಯವಿರುವ ಅನುದಾನದಲ್ಲಿ ಮೈಸೂರು, ಶಿವಮೊಗ್ಗ, ವಿಜಯಪುರ, ಹಾವೇರಿ, ಉತ್ತರ ಕನ್ನಡ, ತುಮಕೂರು, ಬಾಗಲಕೋಟೆ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಬೀದರ್, ಧಾರವಾಡ, ಬೆಳಗಾವಿ, ಕೊಡಗು, ಗದಗ ಜಿಲ್ಲೆಗಳಲ್ಲಿನ ವಿವಿಧ ಸಂಘ ಸಂಸ್ಥೆಗಳ ವತಿಯಿಂದ ಸಮುದಾಯ ಭವನ/ವಿದ್ಯಾರ್ಥಿನಿಲಯ ನಿರ್ಮಾಣಕ್ಕಾಗಿ ಅನುದಾನವನ್ನು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 367 ಬಿಎಂಎಸ್ 2022**

**ಬೆಂಗಳೂರು, ದಿನಾಂಕ: 23.11.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ

...2

23/11/22

ಲೆಕ್ಕಶೀರ್ಷಿಕೆ:2225-03-001-0-05-103 ರಡಿ ಲಭ್ಯವಿರುವ ಅನುದಾನದಲ್ಲಿ ಈ ಕೆಳಕಂಡ ಸಮುದಾಯ ಭವನ/ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ. ಸಂ. | ಸಮುದಾಯ ಭವನ | ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1. | ಉಡುಪಿ ಜಿಲ್ಲೆಯ ಏಳೂರು ಮೊಗವೀರ ಮಹಾಜನ ಸಂಘ (ರಿ) ಮಲ್ಪೆ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ | 100.00 |
| 2. | ಉಡುಪಿ ಜಿಲ್ಲೆ, ಕುಂದಾಪುರ, ಚಿಕನ್ ಸ್ಯಾಲ್ ರಸ್ತೆ, ಮೊಗವೀರ ಮಹಾಜನ ಸೇವಾ ಸಂಘ (ರಿ) (ಬಗ್ವಾಡಿ ಹೋಬಳಿ 1941) ಮೊಗವೀರ ಭವನದ ಮುಂದುವರೆದ ಕಾಮಗಾರಿಗೆ | 50.00 |
| 3. | ಉಡುಪಿ ಜಿಲ್ಲೆ, ಹದಿನಾಲ್ಕುಪಟ್ಲ, ಮೊಗವೀರ ಸಮುದಾಯ ಭವನ, ಉದ್ಯಾವರ, ಪಿತ್ರೋಡಿ ಮುಂದುವರೆದ ಕಾಮಗಾರಿಗೆ | 25.00 |
| 4. | ಮೊಗವೀರ ಸಂಘ, ಬೆಂಗಳೂರು ವತಿಯಿಂದ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ | 200.00 |
| 5. | ಮೊಗವೀರ ಸಂಘ, ತೀರ್ಥಹಳ್ಳಿ ವತಿಯಿಂದ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ | 100.00 |
| 6. | ಮೊಗವೀರ ಸಂಘ, ಸಾಗರ ವತಿಯಿಂದ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ | 65.00 |
| 7. | ಮೊಗವೀರ ಸಂಘ ಜಡೆ, ಸಾಗರ ಶಿವಮೊಗ್ಗ ಜಿಲ್ಲೆ ವತಿಯಿಂದ ಸಮುದಾಯ ಭವನದ ಮುಂದುವರೆದ ಕಾಮಗಾರಿಗೆ | 50.00 |
| | **ಒಟ್ಟು:** | **590.00** |

<u>ಷರತ್ತುಗಳು:</u>

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ (1)ರ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014 (ಭಾ-2) ದಿನಾಂಕ:05.11.2014ರ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸತಕ್ಕದು. ಈ ಯೋಜನೆಯ ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಅಗತ್ಯವಾದ ಎಲ್ಲಾ ದಾಖಲೆಗಳನ್ನು ಪಡೆದು ಪರಿಶೀಲಿಸಿ ಅನುದಾನವನ್ನು ಪಡೆಯಲು ಅರ್ಹತೆ ಇದ್ದಲ್ಲಿ ಮಾತ್ರ ಸದರಿ ಸಂಸ್ಥೆಗೆ ನಿಯಮಾನುಸಾರ ಹಾಗೂ ಅರ್ಹತೆಯನುಸಾರ ಅನುದಾನವನ್ನು ಹಂತ ಹಂತವಾಗಿ ಬಿಡುಗಡೆ ಮಾಡತಕ್ಕದ್ದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಕಟ್ಟಡ ಪ್ರಗತಿಗನುಗುಣವಾಗಿ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡುವುದು ಹಾಗೂ ಬಿಡುಗಡೆ ಮಾಡಿದ ಮೊತ್ತಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಸಂಬಂಧಿಸಿದ ಜಿಲ್ಲಾಧಿಕಾರಿಗಳು ಮುಖಾಂತರ ಪಡೆಯತಕ್ಕದ್ದು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ಪಾರದರ್ಶಕವಾಗಿ ಹಾಗೂ ಮಾರ್ಗಸೂಚಿಗಳನುಸಾರ ಬಳಕೆಯಾಗುತ್ತಿರುವ ಬಗ್ಗೆ ಪರಿಶೀಲಿಸಲು ಪ್ರತಿ ತಿಂಗಳು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಇವರಿಂದ ನಿಗಧಿತ ನಮೂನೆಯಲ್ಲಿ ಭಾವಚಿತ್ರಗಳು ಹಾಗೂ ವರದಿಯನ್ನು ಪಡೆಯತಕ್ಕದ್ದು, ವರದಿಯ ಆಧಾರದಲ್ಲಿ ನಿಯಮಾನುಸಾರ ಅವಶ್ಯಕ ಕ್ರಮ ತೆಗೆದುಕೊಳ್ಳತಕ್ಕದ್ದು.

23/11/22

...3